1560೬ (77) ಟಿPR 01/04/1

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಟಿ.ಎನ್.ಜವರಾಯಿಗೌಡ ಇವರು ನಿಯಮ 330 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಪ್ರಶ್ನೆ:**

ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನಲ್ಲಿ ಪ್ರಧಾನ ಮಂತ್ರಿ ಉಚ್ಚತರ ಶಿಕ್ಷಾ ಅಭಿಯಾನ (PM USHA) ಯೋಜನೆಯ ಅಡಿಯಲ್ಲಿ ಆಯ್ಕೆಗೊಂಡಿರುವ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿಗೆ ಮೂಲಭೂತ ಸೌಕರ್ಯ ಒದಗಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಉನ್ನತ ಶಿಕ್ಷಣ ಇಲಾಖೆಯಿಂದ ಕರ್ನಾಟಕ ಗೃಹ ಮಂಡಳಿ, ಕಾವೇರಿ ಭವನ, ಬೆಂಗಳೂರು ಇವರಿಗೆ ವಹಿಸಲಾಗಿರುತ್ತದೆ. ಈ ಕಾಮಗಾರಿಗೆ ಸಂಬಂಧಪಟ್ಟಂತೆ ಕರೆಯಲಾದ ಟೆಂಡರ್ ವಿವರ, ಟೆಂಡರ್‌ನಲ್ಲಿ ಭಾಗವಹಿಸಿದ ಗುತ್ತಿಗೆದಾರರ ವಿವರ, ಟೆಂಡರ್ ಅಂತಿಮಗೊಂಡ ವಿವರ ಹಾಗೂ ಟೆಂಡರ್‌ನಲ್ಲಿ ಭಾಗವಹಿಸಲು ಟೆಂಡರ್ ನಿಯಮಗಳನ್ವಯ ಸಲ್ಲಿಸಬೇಕಾದ ದಾಖಲೆಗಳ ವಿವರ ಹಾಗೂ ಸದರಿ ಕಾಮಗಾರಿಯು ಕೇಂದ್ರ ಸರ್ಕಾರದ ಯೋಜನೆಯಾಗಿರುವುದರಿಂದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವಾಗ ಸ್ಥಳೀಯ ಲೋಕ ಸಭಾ ಕ್ಷೇತ್ರದ ಸದಸ್ಯರನ್ನು ಹಾಗೂ ವಿಧಾನ ಪರಿಷತ್ ಸದಸ್ಯರನ್ನು ಆಹ್ವಾನಿಸದೆ ಕಾಮಗಾರಿಗಳನ್ನ ಕೈಗೆತ್ತಿಕೊಳ್ಳಲು ಕಾರಣಗಳೇನು ಹಾಗೂ ವಿವಿಧ ಇಲಾಖೆಗಳಿಂದ ಕೇಂದ್ರ ಸರ್ಕಾರದ ಯೋಜನೆಗಳನ್ನು ಕರ್ನಾಟಕ ಗೃಹ ಮಂಡಳಿಗೆ ವಹಿಸಿದ ಕಾಮಗಾರಿಗಳು ಎಷ್ಟು ಕಾಮಗಾರಿಗಳಿಗನುಗುಣವಾಗಿ ಶಿಷ್ಟಾಚಾರ ಪಾಲನೆ ಮಾಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿರುವಂತೆ ಮಾನ್ಯ ಜಿಲ್ಲಾಧಿಕಾರಿಗಳ ಅನುಮತಿ ಪಡೆದು ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಕೈಗೊಳ್ಳಲಾಗಿರುವ ಕಾಮಗಾರಿಗಳ ವಿವರದ ಸಂಪೂರ್ಣ ಮಾಹಿತಿಯನ್ನು ನೀಡುವ ಬಗ್ಗೆ.

**ಉತ್ತರ :**

2023-24 ನೇ ಸಾಲಿನ ಪಿ.ಎಂ ಉಷಾ ಯೋಜನೆಯಡಿ ಮಂಡ್ಯ ಜಿಲ್ಲೆ, ಮದ್ದೂರು ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ತರಗತಿ ಕೊಠಡಿ ಸಭಾಂಗಣ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕಾಲೇಜು ಮತ್ತು ಉನ್ನತ ಶಿಕ್ಷಣ ಇಲಾಖೆಯಿಂದ ಕರ್ನಾಟಕ ಗೃಹ ಮಂಡಳಿಗೆ ವಹಿಸಲಾಗಿದ್ದು, ಟೆಂಡರ್ ವಿವರಗಳು ಕೆಳಕಂಡಂತಿವೆ.

1. ಟೆಂಡರ್‌ಗೆ ಇಡಲಾದ ಮೊತ್ತ ರೂ.2,66,38,227/-.
2. ಬಿಡ್ ಸೆಕ್ಯೂರಿಟಿ ಮೊತ್ತ ರೂ.4,00,000/-.
3. ಬ್ಯಾಂಕ್ ಗ್ಯಾರಂಟಿ ಮೊತ್ತ ರೂ.13,98,000/-.
4. ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ ಮತ್ತು ವೇಳೆ 30.01.2025 ಸಂಜೆ 4.00 ರವರೆಗೆ.

ಸದರಿ ಟೆಂಡರ್ ನಲ್ಲಿ ಭಾಗವಹಿಸಿದ ಗುತ್ತಿಗೆದಾರರ ವಿವರ ಕೆಳಕಂಡಂತಿದೆ.

1. ಮೆ: ವಿಕ್ರಮ್ ಕನ್‌ಸ್ಟ್ರಕ್ಷನ್ಸ್, 14, ಉದರಹಳ್ಳಿ, ಕೊತ್ತನೂರು ಪೋಸ್ಟ್, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ.
2. ಶ್ರೀ ಭಾಸ್ಕರ್.ಸಿ, # 274, 53 ಇ ಕ್ರಾಸ್, ರಾಜಾಜಿನಗರ, ಬೆಂಗಳೂರು.

ಮೇಲಿನ ಇಬ್ಬರು ಬಿಡ್ಡುದಾರರ ಪೈಕಿ ತಾಂತ್ರಿಕ ಬಿಡ್‌ನಲ್ಲಿ ಕಡಿಮೆ ಬಿಡ್ ಮಾಡಿರುವ ಗುತ್ತಿಗೆದಾರರಾದ ಮೆ: ವಿಕ್ರಮ್ ಕನ್‌ಸ್ಟ್ರಕ್ಷನ್ಸ್ ರವರು ಎಲ್-1 ಬಿಡ್ಡುದಾರರಾಗಿರುತ್ತಾರೆ. ಗುತ್ತಿಗೆದಾರರಿಗೆ ನೀಡಿರುವ LOA & ಕಾರ್ಯಾದೇಶದ ಪ್ರತಿಯನ್ನು ಲಗತ್ತಿಸಲಾಗಿದೆ.

ಈ ಟೆಂಡರ್ ನಿಯಮಗಳನ್ವಯ ಸಲ್ಲಿಸಬೇಕಾದ ದಾಖಲೆಗಳ ವಿವರ ಕೆಳಕಂಡಂತಿದೆ.

- Income Tax returns & PAN
- GST Registration Certificate.
- Financial turnover/Annual Turnover Certificate.
- Work done certificate.
- Credit lines/letter of credit/Bankers certificate.
- Key & critical equipment's
- Assessed Available Bid Capacity.
- Electrical license & workdone.
- Water supply sanitary workdone.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಿಂದ ರೂಸಾ ಯೋಜನೆಯಡಿ ಒಟ್ಟು 60 ಕಾಮಗಾರಿಗಳನ್ನು ವಹಿಸಲಾಗಿದೆ.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಪಿ.ಎಂ ಉಷಾ ಯೋಜನೆಯಡಿ ಒಟ್ಟು 9 ಕಾಮಗಾರಿಗಳನ್ನು ವಹಿಸಲಾಗಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರಧಾನ ಮಂತ್ರಿ ಜನ ವಿಕಾಸ ಕಾರ್ಯಕ್ರಮ ಯೋಜನೆಯಡಿ ಒಟ್ಟು 30 ಕಾಮಗಾರಿಗಳನ್ನು ವಹಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 1 ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿ ನಿಲಯ ಕಾಮಗಾರಿಯನ್ನು ವಹಿಸಲಾಗಿದೆ.

ಶಿಲಾನ್ಯಾಸ ಉದ್ಘಾಟನೆ/ಕಾಮಗಾರಿ ಆರಂಭಕ್ಕೆ ಮತ್ತು ಕಾಮಗಾರಿಗಳಿನುಗುಣವಾಗಿ ಶಿಷ್ಟಾಚಾರ ಪಾಲನೆ ಮಾಡಿ, ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿರುವಂತೆ ಜಿಲ್ಲಾಧಿಕಾರಿಗಳ ಅನುಮತಿ ಪಡೆದು, ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ, ಕೈಗೊಳ್ಳಲಾಗಿರುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಉಪಯೋಗಿ ಇಲಾಖೆಯವರು ಆಹ್ವಾನಿಸಬೇಕಾಗುತ್ತದೆ.

ಸಂ :ವಇ 173 ಕಗ್ರಮಂ 2025

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು